# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 766

ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 20.12.2021

ಉತ್ತರಿಸುವ ಸಚಿವರು : ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

*****

| | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಈಗಾಗಲೇ ವಿದ್ಯುತ್ ಸಂಪರ್ಕ ಹೊಂದಿ ಮೀಟರ್ ಅಳವಡಿಸಿರುವ ಮನೆಗಳಿಗೂ ಅಭಿವೃದ್ಧಿ ಶುಲ್ಕವೆಂದು ಮತ್ತೊಮ್ಮೆ ಪ್ರತೀ ಕಿಲೋ ವ್ಯಾಟ್ ಸಾಮರ್ಥ್ಯದ ಆಧಾರದಲ್ಲಿ ಹೆಚ್ಚುವರಿ ಶುಲ್ಕ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ವ್ಯಾಪ್ತಿಯ ಕೊಡಗು ಜಿಲ್ಲೆಯಲ್ಲಿ ಈಗಾಗಲೇ ವಿದ್ಯುತ್ ಸಂಪರ್ಕ ಹೊಂದಿ ಮೀಟರ್ ಅಳವಡಿಸಿರುವ ಮನೆಗಳಿಗೆ ಅಭಿವೃದ್ಧಿ ಶುಲ್ಕವನ್ನು ವಿಧಿಸಲಾಗುತ್ತಿಲ್ಲ. |
| ಆ) | ಬಂದಿದ್ದಲ್ಲಿ, ಯಾವ ಮಾನದಂಡಗಳ ಆಧಾರದಲ್ಲಿ ಅಭಿವೃದ್ಧಿ ಶುಲ್ಕವೆಂದು ಮತ್ತೊಮ್ಮೆ ಪ್ರತೀ ಕಿಲೋ ವ್ಯಾಟ್ ಸಾಮರ್ಥ್ಯದ ಆಧಾರದಲ್ಲಿ ಹೆಚ್ಚುವರಿ ಶುಲ್ಕ ವಿಧಿಸಲಾಗುತ್ತಿದೆ; (ವಿವರ ನೀಡುವುದು) | ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ವ್ಯಾಪ್ತಿಯಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ (KERC) Recovery of Expenditure for supply of Electricity 10 ನೇ ತಿದ್ದುಪಡಿಯ clause 3.2.3 ರನ್ವಯ ಹಾಲಿ ಇರುವ ಸ್ಥಾವರಗಳಿಗೆ ಹೊಸ (Tapping meter) ಅಥವಾ ಹೆಚ್ಚುವರಿ ಭಾರಕ್ಕೆ (Additional load) ವಿದ್ಯುತ್ ಸಂಪರ್ಕ ಕೋರಿ ನಿಗಮಕ್ಕೆ ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಸದರಿ ಸ್ಥಾವರಗಳಿಗೆ ಅಭಿವೃದ್ಧಿ ಶುಲ್ಕವನ್ನು ಪಾವತಿಸಿಕೊಳ್ಳಲಾಗುತ್ತಿದೆ. |
| ಇ) | ಈ ರೀತಿ ಪ್ರತೀ ಕಿಲೋ ವ್ಯಾಟ್ ಸಾಮರ್ಥ್ಯದ ಆಧಾರದಲ್ಲಿ ಹೆಚ್ಚುವರಿ ಶುಲ್ಕ ವಿಧಿಸಲಾಗುತ್ತಿರುವುದರಿಂದ, ಗ್ರಾಹಕರಿಗೆ ಆಗುತ್ತಿರುವ ಹೆಚ್ಚುವರಿ ಹೊರೆಯನ್ನು ತಪ್ಪಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ? | |

ಸಂಖ್ಯೆ: ಎನರ್ಜಿ 276 ಇಬಿಎಸ್ 2021

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು